**ಪ್ರೊ. ಎಸ್.ಜಿ. ಸಿದ್ಧರಾಮಯ್ಯ**
ಅಧ್ಯಕ್ಷರು
ಕನ್ನಡ ಅಭಿವೃದ್ಧಿ ಪ್ರಾಧಿಕಾರ

ಕಚೇರಿ: ಕೊಠಡಿ ಸಂಖ್ಯೆ ೨೦೬
೨ನೇ ಮಹಡಿ, ವಿಧಾನಸೌಧ
ಬೆಂಗಳೂರು-೫೬೦ ೦೦೧
ದೂರವಾಣಿ: ೦೮೦-೨೨೨೫೬೩೬೫
೨೨೦೩೩೫೧೯
ಸಂಚಾರವಾಣಿ-೯೪೪೮೯೪೭೭೩೭

ಸಂಖ್ಯೆ : ಕಅಪ್ರಾ/ಅ/1007/೨೦೧೮ ದಿನಾಂಕ: ೦೫.೧೧.೨೦೧೮.

**ಮಾನ್ಯರೆ,**

ಕನ್ನಡ ಭಾಷೆಯನ್ನು ರಾಜ್ಯದ ಆಡಳಿತದ ಎಲ್ಲ ಮಟ್ಟದಲ್ಲಿ ಅನುಷ್ಠಾನವಾಗುತ್ತಿರುವುದರ ಪರಿಶೀಲನೆಯೂ ಸೇರಿದಂತೆ ಕನ್ನಡ ಭಾಷೆ ಮತ್ತು ಕನ್ನಡ ಜನರ ಹಿತಾಸಕ್ತಿಯನ್ನು ಕಾನೂನಿನನ್ವಯ ಸಂರಚಿಸುವ ಸಲುವಾಗಿ ರಾಜ್ಯ ಶಾಸನದ ಮೂಲಕ ಕನ್ನಡ ಅಭಿವೃದ್ಧಿ ಪ್ರಾಧಿಕಾರ ರಚನೆಯಾಗಿರುತ್ತದೆ.

ಕನ್ನಡ ಭಾಷೆಯನ್ನು ಆಡಳಿತದ ಎಲ್ಲ ಹಂತದಲ್ಲಿ ಸಂಪೂರ್ಣವಾಗಿ ಅನುಷ್ಠಾನಗೊಳಿಸಲು ರಾಜ್ಯ ಸರ್ಕಾರವು ಹೊರಡಿಸಿರುವ ಆದೇಶಗಳನ್ನು ರಾಜ್ಯ ಸರ್ಕಾರ ಮತ್ತು ಸ್ಥಳೀಯ ನಿಕಾಯಗಳ ಅಧಿಕಾರಿಗಳು ಮತ್ತು ನೌಕರರು ಉಲ್ಲಂಘಿಸಿದರೆ ಅಂತಹ ಉಲ್ಲಂಘನೆಯನ್ನು ಕರ್ತವ್ಯಲೋಪವೆಂದು ದಾಖಲಿಸಲು ಮತ್ತು ಅಂತಹವರ ವಿರುದ್ಧ ಅಗತ್ಯ ಕ್ರಮ ಕೈಗೊಳ್ಳುವಂತೆ ನೇಮಕಾತಿ ಪ್ರಾಧಿಕಾರಕ್ಕೆ ಸಲಹೆ ನೀಡಲು ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಅಧಿಕಾರ ನೀಡಲಾಗಿದೆ. (ಕರ್ನಾಟಕ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ ೧೯೯೪ರ ನಿಯಮ ೧೯).

ಉದ್ಯಮ ವ್ಯವಹಾರ ಮತ್ತು ಸಮುದಾಯಕ್ಕೆ ಅಗತ್ಯವಾದ ಆಧಾರಿತ, ಗುಣಮಟ್ಟದ ತಾಂತ್ರಿಕ ಶಿಕ್ಷಣ ಹಾಗೂ ವೃತ್ತಿಪರ ಮಾನವ ಸಂಪನ್ಮೂಲಗಳನ್ನು ಒದಗಿಸುವಲ್ಲಿ ಇಲಾಖೆಯು ನಿರ್ವಹಿಸುತ್ತಿರುವ ಪಾತ್ರ ಅಭಿನಂದನಾರ್ಹ. ಅದಾಗ್ಯೂ **ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದಡಿ ೮೨ ಸರ್ಕಾರಿ, ೪೪ ಅನುದಾನಿತ ಮತ್ತು ೧೬೦ ಖಾಸಗಿ ಪಾಲಿಟೆಕ್ನಿಕ್‌ಗಳು, ೧೧ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ೯ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು ಮತ್ತು ೬ ತಾಂತ್ರಿಕ ಕಿರಿಯ ಶಾಲೆಗಳು ಅಸ್ತಿತ್ವದಲ್ಲಿದ್ದು, ಸದರಿ ಶಿಕ್ಷಣ ಸಂಸ್ಥೆಗಳು ಅಧಿಕೃತ ಅಂತರ್ಜಾಲ ತಾಣಗಳನ್ನು ಹೊಂದಿವೆಯೇ? ಹೊಂದಿದ್ದಲ್ಲಿ, ಸದರಿ ಅಂತರ್ಜಾಲ ತಾಣದ ಮುಖಪುಟ (ಡಿಫಾಲ್ಟ್ ಪೇಜ್) ಹಾಗೂ ಎಲ್ಲಾ ಒಳ ಮಾಹಿತಿಗಳು ಕನ್ನಡದಲ್ಲಿವೆಯೇ? ಇಲ್ಲವಾದಲ್ಲಿ ಸಕ್ಷಮ ಪ್ರಾಧಿಕಾರವು ಈ ಬಗ್ಗೆ ಕೈಗೊಂಡ ಕ್ರಮಗಳೇನು ಎಂಬುದರ ಬಗ್ಗೆ ೭ ದಿನಗಳ ಒಳಗಾಗಿ ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಸೂಕ್ತ ದಾಖಲೆಯೊಂದಿಗೆ ವರದಿಯನ್ನು ಸಲ್ಲಿಸಲು ತಿಳಿಸಿದೆ.**

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

(ಸಹಿ)

**(ಪ್ರೊ. ಎಸ್. ಜಿ. ಸಿದ್ಧರಾಮಯ್ಯ)**

**ಗೆ,**
**ಶ್ರೀ ಹೆಚ್.ಯು. ತಳವಾರ್,**
**ನಿರ್ದೇಶಕರು,**
ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ,
ತಾಂತ್ರಿಕ ಭವನ, ಅರಮನೆ ರಸ್ತೆ, ಬೆಂಗಳೂರು.



13/11/18 @ 11.35am